# ಹಿರಿಯ ದಿವಾಣಿ ನ್ಯಾಯಾಧೀಶರು ಹಾಗೂ ಪ್ರಥಮ ದರ್ಜೆ ನ್ಯಾಯಿಕ ದಂಡಾಧಿಕಾರಿಗಳು ನ್ಯಾಯಾಲಯ, ಕಲಘಟಗಿ

**ಸಿಸಿ ನಂ 48/2021**

**ಸತ್ಯ ಪ್ರತಿಜ್ಞೆಯ ಮೇರೆಗೆ ದಿನಾಂಕ 05-11-2025 ರಂದು ಪ್ರಮಾಣ ಮಾಡಿಸಲಾಯಿತು**

| | | | |
|---|---|---|---|
| **ಸಾಕ್ಷಿಯ ಹೆಸರು** | ಃ | ಚಿದಾನಂದ ಕರವೀರಪ್ಪನವರ | **ಪ್ರಾ.ಸಾ ಃ 10** |
| **ತಂದೆ ಃ ಗಂಡ ಹೆಸರು** | ಃ | ನಾಗಪ್ಪ | **ಚಾ.ಸಾ ಃ 11** |
| **ವಯಸ್ಸು** | ಃ | 56 ವರ್ಷ | |
| **ಉದ್ಯೋಗ** | ಃ | ಪಿ ಎಸ್ ಐ ಕಲಘಟಗಿ | |
| **ವಾಸಸ್ಥಳ** | ಃ | ಕಲಘಟಗಿ | |

**ಮುಖ್ಯ ವಿಚಾರಣೆ ಃ ಮಾನ್ಯ ಸ.ಸ.ಅ. ರವರಿಂದಃ**

ನಾನು 2016 ರಿಂದ 2021 ರವರೆಗೆ ಇಲ್ಲಿಯವರೆಗೆ ಕಲಘಟಗಿ ಪೋಲೀಸ ಠಾಣೆಯಲ್ಲಿ ಎ ಎಸ್ ಐ ಎಂದು ಕರ್ತವ್ಯನಿರ್ವಹಿಸಿದ್ದೇನೆ.

ದಿನಾಂಕ 17.05.2017 ರಂದು ನ್ಯಾಯಾಲಯದಿಂದ ಬಂದ ದೂರನ್ನು ಸ್ವೀಕರಿಸಿಕೊಂಡು ಠಾಣಾ ಗುನ್ನೆ ನಂ 175/2017 ರಂತೆ ಪ್ರಕರಣ ದಾಖಲಿಸಿಕೊಂಡು ಪ್ರಥಮ ವರ್ತಮಾನ ವರದಿಯೊಂದಿಗೆ ದೂರನ್ನು ನ್ಯಾಯಾಲಯಕ್ಕೆ ನಿವೇದಿಸಿಕೊಂಡಿರುತ್ತೇನೆ. ಪ್ರಥಮ ವರ್ತಮಾನ ವರದಿಯನ್ನು ನಿಪಿ-48, ಸಾಕ್ಷಿ ಸಹಿಯನ್ನು ನಿಪಿ-48(ಎ) ಎಂದು ಗುರುತಿಸಲಾಯಿತು. ಅದೇ ದಿನ ಸಾಯಂಕಾಲ 3-00 ರಿಂದ 4-00 ರವರೆಗೆ ಗುನ್ನೆ ಸ್ಥಳಕ್ಕೆ ಬೇಟಿ ನೀಡಿ ನಿಪಿ-35 ರಂತೆ ಗುನ್ನೆ ಸ್ಥಳದ ಪಂಚನಾಮೆಯನ್ನು ಜರುಗಿಸಿರುತ್ತೇನೆ. ಪಂಚನಾಮೆಯನ್ನು ಈಗಾಗಲೇ ನಿಪಿ-35 ಎಂದು ಗುರುತಿಲಾಗಿದ್ದು ಸಾಕ್ಷಿ ಸಹಿಯನ್ನು ನಿಪಿ-35(ಸಿ) ಎಂದು ಗುರುತಿಸಲಾಯಿತು. ಚಾಸಾ-1 ರವರು ತೋರಿಸಿದ ಸ್ಥಳದಲ್ಲಿ ಚಾಸಾ-2 ಮತ್ತು 3 ರವರ ಸಮಕ್ಷಮ ಪಂಚನಾಮೆ ಜರುಗಿಸಿರುತ್ತೇನೆ. ದಿನಾಂಕ 18.05.2017 ರಂದು ಪ್ರಕರಣದ ಕಡತವನ್ನು ಮುಂದಿನ ತನಿಖೆಗಾಗಿ ಚಾಸಾ-12 ರವರಿಗೆ ವಹಿಸಿಕೊಟ್ಟಿರುತ್ತೇನೆ.

**ಪಾಟೀ ಸವಾಲುಃ ಆರೋಪಿತರ ಪರ ವಕೀಲರಿಂದಃ**

ಸದರಿ ದಿನ ನಾನು ಬೆಳಿಗ್ಗೆ 9-00 ರಿಂದ ರಾತ್ರಿ 9-00 ಗಂಟೆವರೆಗೆ ಕರ್ತವ್ಯದಲ್ಲಿ ಇದ್ದೆ. ದೂರು ಬಂದ ತಕ್ಷಣ ನಮ್ಮ ಡೈರಿಯಲ್ಲಿ ನಮೂದ ಮಾಡಿದ್ದೆವೆ. ದೂರಿನ ಬಗ್ಗೆ ಮೇಲಾಧಿಕಾರಿಗಳಿಗೆ ಮಾಹಿತಿ ನೀಡುತ್ತೇವೆ. ಪಂಚನಾಮೆ ಮಾಡಲು ಸಾಕ್ಷಿದಾರರಿಗೆ ನೋಟೀಸ ಕೊಟ್ಟಿದ್ದೇನೆ. ಚಾಸಾ-2 ಮತ್ತು 3 ರವರು ಬ್ಯಾಂಕ ಉದ್ಯೋಗಿಗಳು. ನಾನು ಚಾಸಾ-2 ಮತ್ತು 3 ರವರಿಗೆ ನೋಟೀಸ ಕೊಟ್ಟಿದ್ದೇನೆ ಎಂದು ಸುಳ್ಳು ಹೇಳುತ್ತಿದ್ದೇನೆ ಅಂದರೆ ಸರಿಯಲ್ಲ. ಚಾಸಾ-2 ಮತ್ತು 3 ರವರ ಸಮಕ್ಷಮ ಗುನ್ನೆ ಸ್ಥಳದಲ್ಲಿ ಪಂಚನಾಮೆ ಜರುಗಿಸಿದ್ದೇನೆ ಎಂದು ಸುಳ್ಳು ಹೇಳುತ್ತಿದ್ದೇನೆ ಅಂದರೆ ಸರಿಯಲ್ಲ. ಪ್ರಕರಣಕ್ಕೆ ಅನುಕೂಲವಾಗುವಂತೆ ಸುಳ್ಳು ಸಾಕ್ಷಿ ಹೇಳುತ್ತಿದ್ದೇನೆ ಅಂದರೆ ಸರಿಯಲ್ಲ.

**ಮರು ವಿಚಾರಣೆಃ ಇಲ್ಲ**

(ತೆರೆದ ನ್ಯಾಯಾಲಯದಲ್ಲಿ ನನ್ನ ಉಕ್ತಲೇಖನದ ಮೇರೆಗೆ ಬೆರಳಚ್ಚು ಮಾಡಿಸಲಾಯಿತು)

ಓ ಹೇ ಕೆ ಸರಿ ಇದೆ.

ಹಿರಿಯ ದಿವಾಣಿ ನ್ಯಾಯಾಧೀಶರು,
ಕಲಘಟಗಿ.